## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಶಶಿಲ್ ಜಿ ನಮೋಶಿ, ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಪ್ರಸ್ತಾವನೆಗೆ ಹೇಳಿಕೆ

### ಪ್ರಸ್ತಾಪ

ರಾಜ್ಯದ ವಿವಿಧ ಇಲಾಖೆಗಳಲ್ಲಿ ಕೆ.ಎ.ಎಸ್. ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳು ಖಾಲಿ ಇರುವುದರಿಂದ ಸರ್ಕಾರದ ಯೋಜನೆಯನ್ನು ಜನರಿಗೆ ತಲುಪಿಸಲು ಸಾಧ್ಯವಾಗದೇ ರಾಜ್ಯದಲ್ಲಿ ಆಗಬೇಕಾದ ಅನೇಕ ಅಭಿವೃದ್ಧಿ ಕಾರ್ಯಕ್ರಮಗಳು ಕುಂಠಿತಗೊಂಡಿದ್ದು, ರಾಜ್ಯದ ಸಮತೋಲಿತ ಪ್ರಾದೇಶಿಕ ಅಭಿವೃದ್ಧಿಯನ್ನು ಸಾಧಿಸಲು ಕೇಂದ್ರೀಕೃತ ಮತ್ತು ಸಮಗ್ರ ಕ್ರಮಗಳನ್ನು ಕೈಗೊಳ್ಳಲು ವಿಫಲವಾಗುತ್ತಿದೆ.

ಕಳೆದ 12 ವರ್ಷಗಳಲ್ಲಿ (2011, 2014, 2015 ಮತ್ತು 2017ನೇ ಸಾಲಿನ) ಕೇವಲ ನಾಲ್ಕು ಬಾರಿ ಈ ಗೆಜೆಟೆಡ್ ಪ್ರೊಬೇಷನರರಿ ಹುದ್ದೆಗಳಿಗೆ ನೇಮಕಾತಿ ನಡೆದರೂ ಈ ಹುದ್ದೆಗಳಲ್ಲಿ 2011ರಲ್ಲಿ ಆಯ್ಕೆಯಾದವರಲ್ಲಿ 180ಕ್ಕೂ ಹೆಚ್ಚು ಅಭ್ಯರ್ಥಿಗಳು ಹುದ್ದೆಗೆ ವರದಿಯನ್ನು ಮಾಡಿಕೊಳ್ಳದೇ ಇರುವುದರಿಂದ ಈ ಹುದ್ದೆಗಳನ್ನು ಸಹ ಖಾಲಿ ಹುದ್ದೆಗಳೆಂದು ಪರಿಗಣಿಸಬೇಕಾಗುತ್ತದೆ. ಪ್ರತಿ ವರ್ಷ ಸರ್ಕಾರವು ರಾಜ್ಯದ ಅಭ್ಯರ್ಥಿಗಳಿಗೆ ಕೋಟ್ಯಾಂತರ ರೂಪಾಯಿಗಳ ಅನುದಾನವನ್ನು ಉಚಿತ ಕೆ.ಎ.ಎಸ್. ತರಬೇತಿಗಾಗಿ ನೀಡುತ್ತಿದೆ. ಆದರೆ, ಕಾಲಕಾಲಕ್ಕೆ ತೆರವಾಗುವ ಹಾಗೂ ಪ್ರತಿ ವರ್ಷ ಖಾಲಿಯಾಗುವ ಕೆ.ಎ.ಎಸ್. ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳನ್ನು ಭರ್ತಿಮಾಡಲು ಅಧಿಸೂಚನೆಯನ್ನು ಹೊರಡಿಸದೇ ಕೇವಲ ಮುಂಬಡ್ತಿ ಮಾಡಿ ತುಂಬಿಕೊಳ್ಳಲಾಗುತ್ತಿದೆ. ಇದರಿಂದಾಗಿ ಸಾವಿರಾರು ಅಭ್ಯರ್ಥಿಗಳಿಗೆ ಪ್ರತಿ ವರ್ಷ ಉಚಿತ ಕೆ.ಎ.ಎಸ್. ತರಬೇತಿ ನೀಡುತ್ತಿರುವುದು ಪ್ರಯೋಜನವಾಗುತ್ತಿಲ್ಲ. ಅಲ್ಲದೇ ಸರ್ಕಾರವು ಪ್ರಸ್ತುತ ಕೇವಲ 43 ಹುದ್ದೆಗಳ ನೇಮಕಾತಿಗೆ ಮಾತ್ರ ಅಧಿಸೂಚನೆಯನ್ನು ಹೊರಡಿಸಲು ಕೆ.ಪಿ.ಎಸ್.ಸಿ.ಗೆ ಪ್ರಸ್ತಾವನೆಯನ್ನು ಕಳುಹಿಸಿರುತ್ತದೆ. ಮತ್ತು ಆಯೋಗವು ಮುಂದಿನ 5 ವರ್ಷಗಳಲ್ಲಿ ನಿವೃತ್ತರಾಗಲಿರುವ ಗ್ರೂಪ್ 'ಎ' ಮತ್ತು 'ಬಿ' ಹುದ್ದೆಗಳ ಮತ್ತು ಇಲಾಖೆಗಳಲ್ಲಿ ಖಾಲಿ ಹುದ್ದೆಗಳು ಎಷ್ಟೆಷ್ಟಿವೆ ಎಂಬ ಮಾಹಿತಿಯನ್ನು ಕೇಳಿತ್ತು ಹಾಗೂ ಆ ಹುದ್ದೆಗಳನ್ನು ಭರ್ತಿಮಾಡಲು ಅನುಮತಿ ನೀಡುವಂತೆ ಸರ್ಕಾರಕ್ಕೆ ಕೋರಿ 4 ತಿಂಗಳಾದರೂ ಈ ಕುರಿತು ಸರ್ಕಾರದಿಂದ ಆಯೋಗಕ್ಕೆ ಯಾವುದೇ ಉತ್ತರ ಬಂದಿರುವುದಿಲ್ಲ.

ಆದ್ದರಿಂದ ಪ್ರಸ್ತುತ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ 500ಕ್ಕೂ ಹೆಚ್ಚು ಗೆಜೆಟೆಡ್ ಪ್ರೊಬೇಷನರಿ ಹುದೆಗಳು ಖಾಲಿ ಇರುವುದರಿಂದ ಪ್ರಸ್ತುತ ಕೇವಲ 43 ಹುದ್ದೆಗೆ ನೇಮಕಾತಿಗಾಗಿ ಸಲ್ಲಿಸಿರುವ ಪ್ರಸ್ತಾವನೆಯ ಬದಲಾಗಿ 500ಕ್ಕೂ ಹೆಚ್ಚು ಹುದ್ದೆಗಳ ನೇಮಕಾತಿಗಾಗಿ ಸರ್ಕಾರವು ಅಧಿಸೂಚನೆಯನ್ನು ಹೊರಡಿಸುವ ಸಲುವಾಗಿ ಸೂಕ್ತ ಕ್ರಮವನ್ನು ತೆಗೆದುಕೊಳ್ಳಬೇಕೆಂದು ಈ ಮೂಲಕ ಮಾನ್ಯ ಮುಖ್ಯ ಮಂತ್ರಿಗಳಿಗೆ ಮನವಿ ಮಾಡುತ್ತಾ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಕೋರುತ್ತೇನೆ.

### ಹೇಳಿಕೆ

ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ) ನಿಯಮಗಳು, 1997 ರನ್ವಯ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗಾಗಿ ರಿಕ್ತ ಸ್ಥಾನಗಳ ವಿವರಗಳನ್ನು ನೀಡುವಂತೆ ಸಂಬಂಧಪಟ್ಟ ಆಡಳಿತ ಇಲಾಖೆಗಳನ್ನು ಕೋರಲಾಗಿತ್ತು. ಅದರಂತೆ, ಕೆಲವು ಸಂಬಂಧಪಟ್ಟ ಆಡಳಿತ ಇಲಾಖೆಗಳಿಂದ ಸ್ವೀಕೃತವಾಗಿದ್ದ 43 ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ

ವಿವರಗಳೊಂದಿಗೆ ನೇಮಕಾತಿಗಾಗಿ ಕೋರಿ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಬಿಡುಗಡೆಗೊಳಿಸಲಾಗಿತ್ತು.

ಕರ್ನಾಟಕ ಲೋಕಸೇವಾ ಆಯೋಗವು ಸರ್ಕಾರದ ಪರಿಷ್ಕೃತ ರೋಸ್ಟರ್ ವರ್ಗೀಕರಣದ ಪ್ರಕಾರ ಹುದ್ದೆಗಳನ್ನು ಗುರುತಿಸಿ ಬಿಡುಗಡೆಗೊಳಿಸುವಂತೆ ಸರ್ಕಾರವನ್ನು ಕೋರಿದ್ದರ ಮೇರೆಗೆ ಅದರಂತೆ, ಸಂಬಂಧಪಟ್ಟ ಆಡಳಿತ ಇಲಾಖೆಗಳಿಗೆ ಪರಿಷ್ಕೃತ ರೋಸ್ಟರ್ ಅನುಗುಣವಾಗಿ ಎಲ್ಲಾ ಖಾಲಿ ಹುದ್ದೆಗಳನ್ನು ಗುರುತಿಸಿ ವಿವರ ನೀಡುವಂತೆ ಈಗಾಗಲೇ ಪತ್ರ ಬರೆಯಲಾಗಿದೆ.

ಸಂಬಂಧಪಟ್ಟ ಆಡಳಿತ ಇಲಾಖೆಗಳು ಭರ್ತಿಮಾಡಬೇಕಾದ ರಿಕ್ತ ಸ್ಥಾನಗಳನ್ನು ಮೀಸಲಾತಿ ಅನ್ವಯ ಗುರುತಿಸಿ ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ವಿವರಗಳೊಂದಿಗೆ ಪ್ರಸ್ತಾವನೆಯನ್ನು ಕಳುಹಿಸಿಕೊಡಬೇಕಾಗಿರುತ್ತದೆ. ಸ್ವೀಕೃತವಾಗುವ ಮಾಹಿತಿಯನ್ನು ಪರಿಶೀಲಿಸಿ, ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲು ಮುಂದಿನ ಕ್ರಮಕ್ಕಾಗಿ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಹುದ್ದೆಗಳ ವಿವರಗಳನ್ನು ಬಿಡುಗಡೆಗೊಳಿಸಲಾಗುತ್ತದೆ.

ಸಂಖ್ಯೆ: ಸಿಆಸುಇ 74 ಎಸ್‌ಎಸ್‌ಸಿ 2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ